ದೇವಸ್ಥಾನಗಳ ಅಭಿವೃದ್ಧಿಗಾಗಿ ನೀಡಿರುವ ಅನುದಾನ

89 (187); ಶ್ರೀ ಮಾನಪ್ಪ ಡಿ. ವಜ್ಜಲ್

ಅ) ಲಿಂಗಸುಗೂರು ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಮುಜರಾಯಿ ದೇವಸ್ಥಾನಗಳ ಸಂಖ್ಯೆ ಎಷ್ಟು ಮತ್ತು ಅವುಗಳಾವುವು; (ಸಂಪೂರ್ಣ ವಿವರಗಳನ್ನು ನೀಡುವುದು)

ಆ) ಈ ದೇವಸ್ಥಾನಗಳ ಅಭಿವೃದ್ಧಿ ಅಥವಾ ಜೀರ್ಣೋದ್ಧಾರಕ್ಕಾಗಿ ಕಳೆದ 3 ವರ್ಷಗಳಲ್ಲಿ ಬಿಡುಗಡೆಯಾದ ಮೊತ್ತ ಹಾಗೂ ವೆಚ್ಚ ಮಾಡಿರುವ ಮೊತ್ತವೆಷ್ಟು; (ದೇವಸ್ಥಾನಗಳ ಮಾಹಿತಿ ನೀಡುವುದು)

ಇ) ಈ ದೇವಸ್ಥಾನಗಳಲ್ಲಿ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲಾಗಿದೆಯೇ; ಹಾಗಿದ್ದಲ್ಲಿ, ಎಷ್ಟು ದೇವಸ್ಥಾನಗಳಿಗೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲಾಗಿದೆ; (ದೇವಸ್ಥಾನಗಳವಾರು ಮಾಹಿತಿ ನೀಡುವುದು)

ಈ) ಈ ದೇವಸ್ಥಾನಗಳ ಅಭಿವೃದ್ಧಿಗಾಗಿ ಸರ್ಕಾರ ನೀಡುವ ಅನುದಾನವನ್ನು ಸಕಾಲದಲ್ಲಿ ಖರ್ಚು ಮಾಡದೆ ಹಾಗೆ ಉಳಿಸಿಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಉ) ಹಾಗಿದ್ದಲ್ಲಿ ಸರ್ಕಾರವು ನೀಡುವ ಅನುದಾನವನ್ನು ಸರಿಯಾದ ಸಮಯದಲ್ಲಿ ಬಳಕೆ ಮಾಡಿಕೊಳ್ಳದಿರುವ ಅಧಿಕಾರಿಗಳ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ದೇವಸ್ಥಾನಗಳವಾರು ಮಾಹಿತಿ ನೀಡುವುದು)?

ಶ್ರೀ ಟಿ.ಬಿ. ಜಯಚಂದ್ರ (ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು, ಪಶುಸಂಗೋಪನಾ ಮತ್ತು ಮುಜರಾಯಿ ಸಚಿವರು)

ಅ) ಲಿಂಗಸುಗೂರು ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಒಟ್ಟು 305 ಮುಜರಾಯಿ ದೇವಸ್ಥಾನಗಳಿರುತ್ತವೆ.

ಆ) ಈ ದೇವಸ್ಥಾನಗಳ ಅಭಿವೃದ್ಧಿ ಅಥವಾ ಜೀರ್ಣೋದ್ಧಾರಕ್ಕಾಗಿ ಕಳೆದ 3 ವರ್ಷಗಳಲ್ಲಿ ಕೆಳಕಂಡಂತೆ ಒಟ್ಟು ₹. 36.00 ಲಕ್ಷಗಳ ಅನುದಾನ ಬಿಡುಗಡೆ ಮಾಡಲಾಗಿರುತ್ತದೆ.

ಈ ಅನುದಾನದಲ್ಲಿ ಜಿಲ್ಲಾಧಿಕಾರಿಗಳು, ₹. 26.00 ಲಕ್ಷಗಳ ಕಾಮಗಾರಿಗಳ ಅಂದಾಜು ಪಟ್ಟಿಗಳಿಗೆ ಆಡಳಿತಾತ್ಮಕ ಮಂಜೂರಾತಿ ನೀಡಿ ₹. 16.00 ಲಕ್ಷಗಳನ್ನು ತಹಸೀಲ್ದಾರರಿಗೆ ಬಿಡುಗಡೆ ಮಾಡಿದ್ದು, ಕಾಮಗಾರಿಗಳು ಪ್ರಗತಿಯಲ್ಲಿರುವುದಾಗಿ ತಿಳಿಸಿರುತ್ತಾರೆ.

ವರ್ಷ	ದೇವಸ್ಥಾನದ ಹೆಸರು	ಮಂಜೂರಾದ ಅನುದಾನ (₹. ಲಕ್ಷಗಳಲ್ಲಿ)
2011–12	ಅನುದಾನ ಬಿಡುಗಡೆಯಾಗಿರುವುದಿಲ್ಲ	–
2012–13	ಶ್ರೀ ಕೆಂಪಮ್ಮ ದೇವಸ್ಥಾನ, ಬಂಡೇವಾವಿ	3.00
	ಶ್ರೀ ದ್ಯಾಮವ್ವ ದೇವಸ್ಥಾನ, ಬಂಡೇವಾವಿ	3.00
	ಶ್ರೀ ಅಮರೇಶ್ವರ ದೇವಸ್ಥಾನ, ದೇವರಭೂಪುರ	20.00
2013–14	ಈ ಅನುದಾನಕ್ಕೆ ಸಂಬಂಧಿಸಿದಂತೆ ಮಾನ್ಯ ಶಾಸಕರು ಆಯ್ಕೆ ಮಾಡಿದ ಧಾರ್ಮಿಕ ಸಂಸ್ಥೆಗಳಿಗೆ ಅನುದಾನ ಬಿಡುಗಡೆ ಮಾಡಲು ಸರ್ಕಾರ ಆದೇಶಿಸಿರುತ್ತದೆ. ಮಾನ್ಯ ಶಾಸಕರು ಸಂಸ್ಥೆಗಳ ಪಟ್ಟಿಯನ್ನು ಶಿಫಾರಸ್ಸು ಮಾಡದೇ ಇರುವುದಿರಂದ ಸದರಿ ಅನುದಾನ ಜಿಲ್ಲಾಧಿಕಾರಿಗಳ ಅಭಿರಕ್ಷೆಯಲ್ಲಿ ಬಾಕಿ ಇರುವುದಾಗಿ ತಿಳಿಸಿರುತ್ತಾರೆ.	10.00
	ಒಟ್ಟು	**36.00**

ಇ) ಶ್ರೀ ಅಮರೇಶ್ವರಸ್ವಾಮಿ ದೇವಸ್ಥಾನದಲ್ಲಿ ದೇವಾಲಯದಿಂದ ಬರುವ ಆದಾಯದಿಂದ ಮೂಲಭೂತ ಸೌಕರ್ಯ ಕಲ್ಪಿಸಲಾಗಿರುತ್ತದೆ. ಉಳಿದ ಧಾರ್ಮಿಕ ಸಂಸ್ಥೆಗಳಿಗೆ ಮೂಲಭೂತ ಸೌಕರ್ಯ ಅಗತ್ಯತೆ ಇರುವ ಬಗ್ಗೆ ಜಿಲ್ಲಾಧಿಕಾರಿಗಳಿಂದ ಪ್ರಸ್ತಾವನೆ ಸ್ವೀಕೃತವಾದಲ್ಲಿ ಪರಿಶೀಲಿಸಲಾಗುವುದು.

ಈ) 2012–13ನೇ ಸಾಲಿನಲ್ಲಿ ಈ ವಿಧಾನಸಭಾ ಕ್ಷೇತ್ರದ ದೇವಸ್ಥಾನಗಳಿಗೆ ಮಂಜೂರಾದ ಅನುದಾನಕ್ಕೆ ಸಂಬಂಧಿಸಿದಂತೆ ಕಾಮಗಾರಿಗಳು ಚಾಲ್ತಿಯಲ್ಲಿರುವುದಾಗಿ ಜಿಲ್ಲಾಧಿಕಾರಿಗಳು ತಿಳಿಸಿರುತ್ತಾರೆ.
2013–14 ನೇ ಸಾಲಿನಲ್ಲಿ ಲಿಂಗಸುಗೂರು ವಿಧಾನ ಸಭಾ ಕ್ಷೇತ್ರಕ್ಕೆ ₹. 10.00 ಲಕ್ಷಗಳನ್ನು ಮುಜರಾಯಿ ದೇವಸ್ಥಾನಗಳಿಗೆ ಬಿಡುಗಡೆಯಾಗಿದ್ದು, ಕ್ಷೇತ್ರದ ಮಾನ್ಯ ಶಾಸಕರು ದೇವಸ್ಥಾನಗಳ ಹೆಸರುಗಳನ್ನು ಶಿಪಾರಸ್ಸು ಮಾಡಬೇಕಾಗಿದ್ದು, ಸದರಿ ಅನುದಾನವು ಉಪಯೋಗಿಸಿಕೊಳ್ಳಲು ಬಾಕಿ ಇರುವುದಾಗಿ ಜಿಲ್ಲಾಧಿಕಾರಿಗಳು ತಿಳಿಸಿರುತ್ತಾರೆ.

ಉ) ಈ ಯೋಜನೆಯಡಿ ಬಾಕಿ ಉಳಿದಿರುವ ಅನುದಾನವನ್ನು ಸಕಾಲದಲ್ಲಿ ವಿನಿಯೋಗಿಸಿಕೊಳ್ಳಲು ಜಿಲ್ಲಾಧಿಕಾರಿ, ರಾಯಚೂರು ಇವರಿಗೆ ಸೂಚಿಸಲಾಗಿರುತ್ತದೆ.

ಸಂಚಾರಿ ಪೊಲೀಸ್ ಠಾಣೆ ಪ್ರಾರಂಭಿಸುವುದು

90 (188); ಶ್ರೀ ಮಾನಪ್ಪ ಡಿ. ವಜ್ಜಲ್ (ಲಿಂಗಸುಗೂರು)

ಅ) ಮುದುಗಲ್ ಪಟ್ಟಣದಲ್ಲಿ ಸಂಚಾರಿ ಪೊಲೀಸ್ ಠಾಣೆ ಪ್ರಾರಂಭಿಸುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಈ ಪ್ರಸ್ತಾವನೆಯು ಪ್ರಸ್ತುತ ಯಾವ ಹಂತದಲ್ಲಿದೆ;

ಇ) ಮುದುಗಲ್ ಪಟ್ಟಣ ವಾಹನ ದಟ್ಟಣೆಯಿಂದ ಕೂಡಿದ್ದು, ದಿನನಿತ್ಯ ಅಪಘಾತಗಳು ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;